# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 735 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ರಾಜ್ಯದ ಆಯುಷ್ ಇಲಾಖೆ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳ ಸೇವೆಯನ್ನು ಒದಗಿಸುವಂತೆ ಸಾರ್ವಜನಿಕರಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಈ ಇಲಾಖೆಯಲ್ಲಿ ಸೃಜನೆಯಾಗಿರುವ ಮೂಲ ಹುದ್ದೆಗಳೆಷ್ಟು; ಬೇಡಿಕೆಯಾನುಸಾರ ಕಳೆದ 10 ವರ್ಷಗಳಲ್ಲಿ ಸೃಜನೆ ಮಾಡಿರುವ ತಜ್ಞವೈದ್ಯರು, ಅರೆವೈದ್ಯಕೀಯ, ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳೆಷ್ಟು ಮತ್ತು ಇತ್ತೀಚಿನ ಅಗತ್ಯಕ್ಕನುಗುಣವಾಗಿ ಹುದ್ದೆಗಳನ್ನು ಸೃಜನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿ ಆಯುಷ್ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳ ಸೇವೆಯನ್ನು ಒದಗಿಸುವಂತೆ ಸಾರ್ವಜನಿಕರಿಂದ ಬೇಡಿಕೆ ಸ್ವೀಕೃತವಾಗಿರುವುದಿಲ್ಲ.<br><br>ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿಯಲ್ಲಿ ತಜ್ಞ ವೈದ್ಯರುಗಳ ಹುದ್ದೆಯು ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿರುತ್ತವೆ. ಸದರಿ ಯೋಜನೆಯು ಅಸ್ತಿತ್ವದಲ್ಲಿರುವವರೆಗೂ ಮಾತ್ರ ಈ ಹುದ್ದೆಗಳು ಚಾಲ್ತಿಯಲಿರುತ್ತವೆ. |
| (ಆ) | ಕೇಂದ್ರ ಸರ್ಕಾರದ ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆಯಡಿಯಲ್ಲಿ ಅನುದಾನ ಪಡೆದು ರಾಜ್ಯದಲ್ಲಿ ಅಭಿವೃದ್ಧಿ ಪಡಿಸಿರುವ ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳೆಷ್ಟು (ವಿವರನೀಡುವುದು). | ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆಯಡಿಯಲ್ಲಿ ಜಿಲ್ಲಾ ಕೇಂದ್ರಗಳಲ್ಲಿ 21, ತಾಲ್ಲೂಕು ಕೇಂದ್ರಗಳಲ್ಲಿ 69 ಮತ್ತು ಗ್ರಾಮೀಣ ಭಾಗದಲ್ಲಿ 1 ಆಸ್ಪತ್ರೆಗಳನ್ನು ಅಭಿವೃದ್ಧಿಪಡಿಸಲಾಗಿದೆ. |
| (ಇ) | ಸದರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ IPD beds ಎಷ್ಟು ಮತ್ತು ಈ ಆಸ್ಪತ್ರೆಗಳಲ್ಲಿ ಒಳರೋಗಿ ವಿಭಾಗದಲ್ಲಿ ದಾಖಲಾಗಿರುವ ರೋಗಿಗಳ ಸಂಖ್ಯೆ ಎಷ್ಟು; (ಕಳೆದ 5 ವರ್ಷಗಳ ಮಾಹಿತಿ ನೀಡುವುದು) | ಸದರಿ ಆಸ್ಪತ್ರೆಗಳಲ್ಲಿ 805 IPD beds ಲಭ್ಯವಿದ್ದು, ಈ ಆಸ್ಪತ್ರೆಗಳಲ್ಲಿ ಕಳೆದ 5 ವರ್ಷಗಳಲ್ಲಿ ಒಳರೋಗಿಗಳ ವಿಭಾಗದಲ್ಲಿ ದಾಖಲಾಗಿರುವ ರೋಗಿಗಳ ವಿವರ ಈ ಕೆಳಕಂಡಂತಿದೆ: |

| Year | Total |
|---|---|
| 2018-19 | 27604 |
| 2019-20 | 38238 |
| 2020-21 | 5628 |
| 2021-22 | 16932 |
| 2022-23 (ನವೆಂಬರ್ - 2022 ರವರೆಗೆ) | 29392 |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಈ) | ಈ ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ ಚಿಕಿತ್ಸೆ ನೀಡುವ ಎಲ್ಲಾ ಸೌಲಭ್ಯಗಳು ಲಭ್ಯವಿದ್ದರೂ ಒಳರೋಗಿಗಳನ್ನು ದಾಖಲು ಮಾಡಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br><br>ಕಡ್ಡಾಯವಾಗಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಎಲ್ಲಾ ಜಿಲ್ಲಾ ಆಯುಷ್ ಅಧಿಕಾರಿಗಳಿಗೆ ಸೂಚಿಸಲಾಗಿದೆ. |

| | | |
|---|---|---|
| (ಉ) | ರಾಜ್ಯದ ಆಯುಷ್ ಇಲಾಖೆಯಲ್ಲಿ ಸಿ ಅಂಡ್ ಆರ್ ನಿಯಮಗಳನ್ನು ರೂಪಿಸಿಕೊಂಡಿದೆಯೇ; ನಿಯಮಾನುಸಾರ ಸಿ ಅಂಡ್ ಆರ್ ನಿಯಮಗಳನ್ನು ಕಾಲ ಕಾಲಕ್ಕೆ ಪರಿಷ್ಕರಿಸಲಾಗಿದೆಯೇ? (ಸಿ ಅಂಡ್ ಆರ್ ನಿಯಮಗಳ ಸಹಿತ ಮಾಹಿತಿ ನೀಡುವುದು) | ಆಯುಷ್ ಇಲಾಖೆಯಲ್ಲಿ ಸಿ ಅಂಡ್ ಆರ್ ನಿಯಮಗಳನ್ನು ರೂಪಿಸಲಾಗಿದೆ ಹಾಗೂ ನಿಯಮಾನುಸಾರ ಸಿ ಅಂಡ್ ಆರ್ ನಿಯಮಗಳನ್ನು ಪರಿಷ್ಕರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಆಕುಕ 405 ಪಿಐಎಂ 2022**

**(ಡಾ|| ಕೆ. ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು